## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 355 (500)
ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 19.02.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ದೈಹಿಕ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡುತ್ತಿದ್ದರೂ 6ನೇ ತರಗತಿಯಿಂದ 10ನೇ ತರಗತಿಯವರೆಗಿನ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ ಎಷ್ಟು; | • ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ:17704.<br>• ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ:1631 |
| ಆ) | ರಾಜ್ಯದಲ್ಲಿ ಅಭ್ಯಸಿಸುತ್ತಿರುವ ಮಕ್ಕಳಿಗೆ ದೈಹಿಕ ಮತ್ತು ಮಾನಸಿಕ ಆರೋಗ್ಯದ ಅವಶ್ಯಕತೆ ಇದ್ದರೂ ಹಾಗೂ ರಾಜ್ಯದಲ್ಲಿ ದೇಶದಾದ್ಯಂತ ಕ್ರೀಡೆಗಳಿಗೆ ಉತ್ತೇಜನ ನೀಡಲು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದರೂ ದೈಹಿಕ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡದಿರಲು ಕಾರಣಗಳೇನು; | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br>• ರಾಜ್ಯದಲ್ಲಿ ಖಾಲಿಯಿರುವ ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳಲ್ಲಿ ಪ್ರಸ್ತುತ 2120 ಹುದ್ದೆಗಳ ಭರ್ತಿಗೆ ಅನುಮತಿ ನೀಡಲು ಕೋರಿದ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**<br>• 2014-15ನೇ ಸಾಲಿನಲ್ಲಿ 148 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br>• ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಲಾಗಿತ್ತು.<br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಇ) | ಎಲ್ಲಾ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳಲು ಇನ್ನಾದರೂ ಕ್ರಮ ಕೈಗೊಳ್ಳಲಾಗುವುದೇ?; | |

ಸಂಖ್ಯೆ: ಇಪಿ 43 ಎಲ್‌ಬಿಪಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

Scanned with OKEN Scanner

[redacted] ವಿಧಾನ ಸದಸ್ಯರಾದ ಶ್ರೀ ಅ ದೇವೇಗೌಡ (ಪದವೀಧರ ಕ್ಷೇತ್ರ) ವರ ಪ್ರಶ್ನೆ ಸಂಖ್ಯೆ: 355(500) ಕ್ಕೆ ಉತ್ತರಿಸುವ ಬಗ್ಗೆ.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇತ್ತೀಚಿನ ದಿನಗಳಲ್ಲಿ ದೈಹಿಕ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡುತ್ತಿದ್ದರೂ 6ನೇ ತರಗತಿಯಿಂದ 10ನೇ ತರಗತಿಯವರೆಗಿನ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ ಎಷ್ಟು: | **ಸರ್ಕಾರಿ ಪ್ರಾಥಮಿಕ ಶಾಲೆ:-**<br>1 ರಾಜ್ಯದ ಸರ್ಕಾರಿ ಹಿರಿಯ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ -17704<br>2. ಸರ್ಕಾರದ ಆದೇಶ ಸಂಖ್ಯೆ ಇಡಿ 64 ಎಸ್‌ಪಿಇ ದಿನಾಂಕ 13.04.1971 ರ ಪ್ರಕಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 7 ನೇ ಹುದ್ದೆಗೆ ಅವಕಾಶವಿರುತ್ತದೆ. ಅಂತಹ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 280 ಕ್ಕೂ ಹೆಚ್ಚು ಸಂಖ್ಯಾಬಲವನ್ನು ಹೊಂದಿರಬೇಕಾಗಿರುತ್ತದೆ.<br>3. ಪ್ರಸ್ತುತ ಮಂಜೂರಾದ ಹುದ್ದೆಗಳ ಸಂಖ್ಯೆಯ ಮಿತಿಯೊಳಗೆ ವಿದ್ಯಾರ್ಥಿಗಳ ಸಂಖ್ಯೆ 200ಕ್ಕೂ ಅಥವಾ ಮೇಲ್ಪಟ್ಟ ಶಾಲೆಗಳಲ್ಲಿ ಮಾತ್ರ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಶಿಕ್ಷಕರ ಹುದ್ದೆಯನ್ನು ಲಭ್ಯಪಡಿಸಲಾಗುತ್ತಿದೆ. |
| (ಆ) | ರಾಜ್ಯದಲ್ಲಿ ಅಭ್ಯಸಿಸುತ್ತಿರುವ ಮಕ್ಕಳಿಗೆ ದೈಹಿಕ ಮತ್ತು ಮಾನಸಿಕ ಆರೋಗ್ಯದ ಅವಶ್ಯಕತೆ ಇದ್ದರೂ ಹಾಗೂ ರಾಜ್ಯದಲ್ಲಿ ದೇಶವ್ಯಾದ್ಯಂತ ಕ್ರೀಡೆಗಳಿಗೆ ಉತ್ತೇಜನ ನೀಡಲು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದರೂ ದೈಹಿಕ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡದಿರಲು ಕಾರಣಗಳೇನು: | **ಸರ್ಕಾರಿ ಪ್ರಾಥಮಿಕ ಶಾಲೆ:-**<br>ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 2120 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲು ಕೋರಿ ಈ ಕಛೇರಿ ಪತ್ರ ದಿನಾಂಕ 01.12.2021 ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಆದೇಶ ನಿರೀಕ್ಷಿಸಿದೆ. ಪ್ರತಿ ಲಗತ್ತಿಸಿದೆ. |
| ಇ | ಎಲ್ಲಾ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳಲು ಇನ್ನಾದರೂ ಕ್ರಮ ಕೈಗೊಳ್ಳಲಾಗುವುದೇ | ರಾಜ್ಯದಲ್ಲಿ ಒಟ್ಟು 17704 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿದ್ದು, ಎಲ್ಲಾ ಶಾಲೆಗಳಿಗೆ ಹುದ್ದೆಗಳನ್ನು ಮಂಜೂರು ಮಾಡುವುದು ಸರ್ಕಾರದ ನೀತಿಯ ವಿಷಯವಾಗಿದ್ದು, ಆರ್ಥಿಕ ವೆಚ್ಚಗಳನ್ನು ಒಳಗೊಂಡಿರುವುದರಿಂದ ಸರ್ಕಾರದ ಹಂತದಲ್ಲಿ ಉತ್ತರಿಸಬೇಕಾಗಿದೆ. |

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಮೈನಾರಿಟಿ ಶಾಖೆಗೆ ಕ್ರೂಢೀಕರಣಕ್ಕಾಗಿ.

Scanned with OKEN S
Scanned with OKEN Scanner

ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-560001.**

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ **ಶ್ರೀ ಅ ದೇವೇಗೌಡ (ಪದವೀಧರ ಕ್ಷೇತ್ರ)** ರವರ ಪ್ರಶ್ನೆ ಸಂಖ್ಯೆ: 355(500) ಕ್ಕೆ ಉತ್ತರ ನೀಡುತ್ತಿರುವ ಬಗ್ಗೆ.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇತ್ತೀಚಿನ ದಿನಗಳಲ್ಲಿ ದೈಹಿಕ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡುತ್ತಿದ್ದರೂ 6ನೇ ತರಗತಿಯಿಂದ 10ನೇ ತರಗತಿಯವರೆಗಿನ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದ ಶಾಲೆಗಳ ಸಂಖ್ಯೆ ಎಷ್ಟು; | **ಸರ್ಕಾರಿ ಪ್ರಾಥಮಿಕ ಶಾಲೆ:-** ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಒಟ್ಟಾರೆ ಮಂಜೂರಾದ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-2 ಹುದ್ದೆಗಳ ಸಂಖ್ಯೆ-6772 ಈ ಪೈಕಿ 4029 ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ.<br>ಮಂಜೂರಾದ ಹುದ್ದೆಗಳ ಸಂಖ್ಯೆಯ ಮಿತಿಯೊಳಗೆ ವಿದ್ಯಾರ್ಥಿಗಳ ಸಂಖ್ಯೆ 200ಕ್ಕೂ, ಅಥವಾ ಮೇಲ್ಪಟ್ಟ ಶಾಲೆಗಳಲ್ಲಿ ಮಾತ್ರ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಶಿಕ್ಷಕರ ಹುದ್ದೆಯನ್ನು ಲಭ್ಯಪಡಿಸಲಾಗುತ್ತಿದೆ.<br>**ಸರ್ಕಾರಿ ಪ್ರೌಢಶಾಲೆ:-**<br>ರಾಜ್ಯದ ಸರ್ಕಾರಿ ಪ್ರೌಢಶಾಲೆಗಳ ಪ್ರತಿ ಶಾಲೆಗಳಲ್ಲಿಯೂ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಇರುತ್ತವೆ. ಆದರೆ 1642 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಖಾಲಿಯಿರುತ್ತವೆ. |
| (ಆ) | ರಾಜ್ಯದಲ್ಲಿ ಅಭ್ಯಸಿಸುತ್ತಿರುವ ಮಕ್ಕಳಿಗೆ ದೈಹಿಕ ಮತ್ತು ಮಾನಸಿಕ ಆರೋಗ್ಯದ ಅವಶ್ಯಕತೆ ಇದ್ದರೂ ಹಾಗೂ ರಾಜ್ಯದಲ್ಲಿ ದೇಶದಾದ್ಯಂತ ಕ್ರೀಡೆಗಳಿಗೆ ಉತ್ತೇಜನ ನೀಡಲು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದರೂ ದೈಹಿಕ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡದಿರಲು ಕಾರಣಗಳೇನು; | **ಸರ್ಕಾರಿ ಪ್ರಾಥಮಿಕ ಶಾಲೆಗಳು:-**<br>ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ 2120 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಈ ಕಛೇರಿ ಪತ್ರ ದಿನಾಂಕ:01.12.2021 ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಆದೇಶ ನಿರೀಕ್ಷಿಸಲಾಗಿದೆ.<br>**ಸರ್ಕಾರಿ ಪ್ರೌಢಶಾಲೆಗಳು:-**<br>ಸರ್ಕಾರದ ಆದೇಶ ಸಂಖ್ಯೆ" ಇಪಿ 14 ಎಲ್‌ಬಿಪಿ 2022 ದಿನಾಂಕ: 13.09.2022 ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು ಅನುಮತಿ ನೀಡಿರುವ 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೊಳಪಟ್ಟು, ನೇರನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿರುತ್ತದೆ. ಆದರೆ 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಒಟ್ಟು 13352 ಹುದ್ದೆಗಳ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಪ್ರಯುಕ್ತ ಸದರ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿಗೆ ಒಟ್ಟು 1648 ಹುದ್ದೆಗಳು ಮಾತ್ರ ಉಳಿದಿರುತ್ತವೆ. ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ಅನುಮತಿ ಕೋರಿ ಈ ಕಛೇರಿ ಕಡತ ಸಂಖ್ಯೆ:1005454 ರಲ್ಲಿ ಏಕ-ಕಡತವನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಪ್ರಯುಕ್ತ ಸರ್ಕಾರವು ಅನುಮತಿಸಿದ ನಂತರ ಕೂಡಲೇ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಕ್ರಮವಹಿಸಲಾಗುವುದು. |
| | ಎಲ್ಲಾ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳಲು ಇನ್ನಾದರೂ ಕ್ರಮ ಕೈಗೊಳ್ಳಲಾಗುವುದೇ? | **ಸರ್ಕಾರಿ ಪ್ರಾಥಮಿಕ ಶಾಲೆಗಳು:-**<br>ರಾಜ್ಯದಲ್ಲಿ ಒಟ್ಟು 41908 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಎಲ್ಲಾ 41908 ಶಾಲೆಗಳಿಗೆ ಹುದ್ದೆಗಳನ್ನು ಮಂಜೂರು ಮಾಡಬೇಕಾಗುತ್ತದೆ. ಸರ್ಕಾರದ ಆರ್ಥಿಕ ವೆಚ್ಚಗಳನ್ನು ಒಳಗೊಂಡಿರುವುದರಿಂದ ಸರ್ಕಾರದ ಹಂತದಲ್ಲಿ ಉತ್ತರಿಸಬೇಕಾಗಿದೆ<br>**ಸರ್ಕಾರಿ ಪ್ರೌಢಶಾಲೆಗಳು:-**<br>ಈಗಾಗಲೇ ರಾಜ್ಯದಲ್ಲಿ ಪ್ರತಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಂದು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಲಾಗಿದೆ. ಮೇಲೆ ವಿವರಿಸಿದಂತೆ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಕುರಿತು ಸರ್ಕಾರಕ್ಕೆ ಏಕ-ಕಡತ ಸಲ್ಲಿಸಲಾಗಿದೆ. ಸರ್ಕಾರದಿಂದ ಅನುಮೋದನೆ ಬಂದ ಕೂಡಲೇ ಕ್ರಮವಹಿಸಲಾಗುವುದು. |

**ಉಪನಿರ್ದೇಶಕರು (ಮೈನಾರಿಟಿ)**

Scanned with OKEN Scanner